# ಹೊಳೆನರಸೀಪುರದ ಅಪರ ಜೆ.ಎಂ.ಎಫ್.ಸಿ. ರವರ ನ್ಯಾಯಾಲಯದಲ್ಲಿ.

## ಸಿ.ಸಿ. ನಂ: 1262/2022

| | | |
|---|---|---|
| ಸಾಕ್ಷಿಯ ಹೆಸರು | : ರುದ್ರಪ್ಪ | ಸಿ.ಡಬ್ಲ್ಯೂ : 01 |
| ತಂದೆ ಹೆಸರು | : ಬಸಪ್ಪ | ಪಿ.ಡಬ್ಲ್ಯೂ : 01 |
| ವಯಸ್ಸು | : 67 ವರ್ಷ | ಪ್ರಮಾಣೀಕರಿಸಿದ ದಿ: 04/05/2024 |
| ವೃತ್ತಿ | : ವ್ಯವಸಾಯ | |
| ವಾಸ | : ಬೆಟ್ಟದ ಸಾತೇನಹಳ್ಳಿ ಗ್ರಾಮ | |

ಸಾಕ್ಷಿಗೆ ಪ್ರಮಾಣ ವಚನ ಭೋಧಿಸಲಾಯಿತು

ಮುಖ್ಯ ವಿಚಾರಣೆ:- ಮಾನ್ಯ ಎ.ಪಿ.ಪಿ.ಯವರಿಂದ:

ಈ ಪ್ರಕರಣದ ಬಗ್ಗೆ ನನಗೆ ಏನು ಗೊತ್ತಿಲ್ಲ. ಆರೋಪಿ ನನಗೆ ಗೊತ್ತಿಲ್ಲ. ನನಗೆ ಯಾವುದೇ ಅಪಘಾತದ ವಿಚಾರ ಗೊತ್ತಿಲ್ಲ. ನಾನು ಅಪಘಾತದ ಸಂಬಂಧ ಆರೋಪಿಯ ವಿರುದ್ಧ ಯಾವುದೇ ದೂರುಗಳನ್ನು ನೀಡಿಲ್ಲ. ಸಾಕ್ಷಿ ದೂರಿನಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸದರಿ ದೂರನ್ನು ನಿಪಿ-1 ಎಂದು, ಸಾಕ್ಷಿ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು.

(ಮಾನ್ಯ ಎ.ಪಿ.ಪಿ.ಯವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಅನುಮತಿ ಕೋರಿರುತ್ತಾರೆ. ಅನುಮತಿ ನೀಡಲಾಯಿತು.)

ಪಾಟೀ ಸವಾಲು: - ಮಾನ್ಯ ಎ.ಪಿ.ಪಿ. ರವರಿಂದ:

ದಿನಾಂಕ: 09.08.2022 ರಂದು ಸಂಜೆ 08.15 ಗಂಟೆ ಸಮಯದಲ್ಲಿ ಕೆಲಸದ ನಿಮಿತ್ತ ಬಾಬ್ತು ಬೈಕ್ ಸಂಖ್ಯೆ ಕೆಎ-13-ಇಇ-1996 ಬೈಕಿನಲ್ಲಿ ಗಾಯಾಳು ವಿಶಾಲ್ ರಾಜ ಅನ್ನು ಬೈಕ್ ಹೊಡಿಸಿಕೊಂಡು ಹಿಂಬದಿ ನನ್ನ ಮಗ ಕುಳಿತಿರುತ್ತಾನೆ. ಹೊಳೆನರಸೀಪುರದಿಂದ ನಮ್ಮ ಗ್ರಾಮದ ಬೆಟ್ಟದ ಸಾತೇನಹಳ್ಳಿ ಕಡೆಗೆ ಗ್ರಾಮಕ್ಕೆ ಬರುವಾಗಾ ಮಲ್ಲೇಶಪುರ ಡೌನ್ ಕೊಡಯ್ಯನಕುಮಾರ ಜಮೀನಿನ ನೇರದಲ್ಲಿ ಬರುತ್ತಿದ್ದಾಗ ರಸ್ತೆಯಲ್ಲಿ ಆಕಸ್ಮಿಕವಾಗಿ ಎತ್ತು ಅಡ್ಡ ಬಂದಿದ್ದರಿಂದ ಇಬ್ಬರು ರಸ್ತೆಯಲ್ಲಿ ಬಿದ್ದರು ಎಂದರೆ ನನಗೆ ಗೊತ್ತಿಲ್ಲ. ನನ್ನ ಮಗನ ಮೃತ ಮಹದೇವನ ತಲೆಯ ಹಿಂಭಾಗಕ್ಕೆ ರಕ್ತಗಾಯವಾಗಿ ಬೈಕ್ ಚಾಲನೆ ಮಾಡುತ್ತಿದ್ದವನಿಗೆ ಮೈಕೈಗೆ ಪೆಟ್ಟಾಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಅಲ್ಲೆ ಬರುತ್ತಿದ್ದ ನಮ್ಮ ಊರಿನ ಚಾಸಾ-2 ಮತ್ತು 3 ರವರು ಹೋಗಿ ಎತ್ತಿ ಸುಧಾರಿಸಿ ತಮ್ಮ ಬೈಕ್ ನಲ್ಲಿ ಆಸ್ಪತ್ರೆಗೆ ಕರೆದುಕೊಂಡು ಬರುತ್ತಿದ್ದಾಗ ದಾರಿ ಮಧ್ಯದಲ್ಲಿ ಮಹದೇವ ಹಿಂಬದಿ ಸವಾರ ಮೃತಪಟ್ಟಿರುತ್ತಾರೆ ಎಂದರೆ ನನಗೆ ಗೊತ್ತಿಲ್ಲ. ಬೈಕ್ ಚಾಲನೆ ಮಾಡುತ್ತಿದ್ದ ಆರೋಪಿಗೆ ಸಣ್ಣಪುಟ್ಟ ಗಾಯಗಳು ಆಗಿರುತ್ತದೆ ಎಂದರೆ ನನಗೆ ಗೊತ್ತಿಲ್ಲ. ಸದರಿ ವಿಚಾರವನ್ನು ನನಗೆ ಚಾಸಾ-2 ಮತ್ತು 3 ರವರು ತಿಳಿಸಿದರು ಎಂದರೆ ಸರಿಯಲ್ಲ. ಈ ಸಂಬಂಧವಾಗಿ ದಿನಾಂಕ: 10.08.2022 ರಂದು ಬೆಳಿಗ್ಗೆ 07.00 ಗಂಟೆಗೆ ಠಾಣೆಗೆ ಹಾಜರಾಗಿ ಲಿಖಿತ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಅಪಘಾತಪಡಿಸಿದ ಬೈಕಿನ ಚಾಲಕ ಈಗ ನ್ಯಾಯಾಲಯದ ಮುಂದೆ ಇರುವ ಆರೋಪಿಯೇ ಎಂದರೆ ಗೊತ್ತಿಲ್ಲ. ನನಗೆ ಅಪಘಾತದ ಬಗ್ಗೆ ಎಲ್ಲಾ ವಿಚಾರ ಗೊತ್ತಿದ್ದರೂ ಆರೋಪಿ ನನ್ನ ಸಂಬಂಧಿಕನಾಗಿರುವುದರಿಂದ ಸದರಿ ಪ್ರಕರಣವನ್ನು ಆರೋಪಿಯೊಂದಿಗೆ ರಾಜೀ ಮಾಡಿಕೊಂಡು, ಆರೋಪಿಗೆ ಸಹಾಯ ಮಾಡಲು ನ್ಯಾಯಾಲಯದಲ್ಲಿ ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಬಿ.ಪಿ. ವಕೀಲರಿಂದಃ ಪಾಟಿ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.</u>

<u>ಮರು ವಿಚಾರಣೆ ಇಲ್ಲಃ</u>

(ಬಹಿರಂಗ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

**ಓ.ಹೇ.ಕೇ.ಸ.ಇ.**

ಅಪರ ಸಿವಿಲ್ ಜಡ್ಜ್ ಮತ್ತು ಜೆಎಂಎಫ್.ಸಿ,
ಹೊಳೆನರಸೀಪುರ